Akashvani : Bengaluru
National Bulletin In Kannada
07.10.2025 : 1310hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
07.10.2025 : 1310hrs
*******

ಮುಖ್ಯಾಂಶಗಳು

೧. ಆರನೇ ಆವೃತ್ತಿಯ ಗ್ಲೋಬಲ್ ಫಿನ್‌ಟೆಕ್ ಫೆಸ್ಟ್‌ಗೆ ಇಂದು ಮುಂಬೈನಲ್ಲಿ ಚಾಲನೆ

೨. ಜವಾಬ್ದಾರಿಯುತ ಕೃತಕ ಬುದ್ಧಿಮತ್ತೆಯ ಅನುಷ್ಠಾನಕ್ಕೆ ನಂಬಿಕೆ, ಸುರಕ್ಷತೆ ಅತ್ಯಗತ್ಯ - ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್

೩. ತನ್ನದೇ ಜನರ ಮೇಲೆ ಪಾಕಿಸ್ತಾನದಿಂದ ಬಾಂಬ್ ದಾಳಿ: ವಿಶ್ವಸಂಸ್ಥೆಯಲ್ಲಿ ಭಾರತ ಗಂಭೀರ ಆರೋಪ

೪. ಮಹಿಳಾ ಏಕದಿನ ವಿಶ್ವಕಪ್ ಕ್ರಿಕೆಟ್: ಇಂದಿನ ಪಂದ್ಯದಲ್ಲಿ ಇಂಗ್ಲೆಂಡ್-ಬಾಂಗ್ಲಾದೇಶ ಮುಖಾಮುಖಿ

*******************

ಆರನೇ ಆವೃತ್ತಿಯ ಗ್ಲೋಬಲ್ ಫಿನ್‌ಟೆಕ್ ಫೆಸ್ಟ್ ಇಂದು ಮುಂಬೈನಲ್ಲಿ ಆರಂಭವಾಗಲಿದೆ. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಉದ್ಘಾಟನಾ ಅಧಿವೇಶನದಲ್ಲಿ ಭಾಗವಹಿಸಲಿದ್ದಾರೆ. 'ಕೃತಕ ಬುದ್ಧಿಮತ್ತೆಯಿಂದ ನಡೆಸಲ್ಪಡುವ ಉತ್ತಮ ಜಗತ್ತಿಗೆ ಹಣಕಾಸು ಸಬಲೀಕರಣ' ಎಂಬುದು ಈ ವರ್ಷದ ಅಧಿವೇಶನದ ಧ್ಯೇಯವಾಕ್ಯವಾಗಿದೆ. ಪ್ರಧಾನಿ ನರೇಂದ್ರ ಮೋದಿ ಮತ್ತು ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್ ಗುರುವಾರ ಗ್ಲೋಬಲ್ ಫಿನ್‌ಟೆಕ್ ಫೆಸ್ಟ್‌ನಲ್ಲಿ ಪ್ರಮುಖ ಭಾಷಣ ಮಾಡಲಿದ್ದಾರೆ. ಇಬ್ಬರೂ ನಾಯಕರು ಉದ್ಯಮ ತಜ್ಞರು, ನೀತಿ ನಿರೂಪಕರು ಮತ್ತು ನಾವೀನ್ಯಕಾರರೊಂದಿಗೆ ತೊಡಗಿಸಿಕೊಳ್ಳಲಿದ್ದಾರೆ. ಸಮ್ಮೇಳನದಲ್ಲಿ ೪೦೦ ಕ್ಕೂ ಹೆಚ್ಚು ಪ್ರದರ್ಶಕರು ಭಾಗವಹಿಸಲಿದ್ದಾರೆ. ಕಾರ್ಯಾಗಾರಗಳು, ಹ್ಯಾಕಥಾನ್‌ಗಳು, ಹೂಡಿಕೆಗಳು, ಫಿನ್‌ಟೆಕ್ ಪ್ರಶಸ್ತಿಗಳು ಸೇರಿದಂತೆ ಹಲವಾರು ಪೂರಕ ಚಟುವಟಿಕೆಗಳು ಇದೇ ಸಂದರ್ಭದಲ್ಲಿ ನಡೆಯಲಿವೆ. ಮೂರು ದಿನಗಳ ಈ ಕಾರ್ಯಕ್ರಮ ಮುಂಬೈನ ಜಿಯೋ ವರ್ಲ್ಡ್ ಸೆಂಟರ್‌ನಲ್ಲಿ ನಡೆಯಲಿದ್ದು, ಒಂದು ಲಕ್ಷಕ್ಕೂ ಹೆಚ್ಚು ಜನರು ಭಾಗವಹಿಸುವ ನಿರೀಕ್ಷೆಯಿದೆ. ಅಲ್ಲದೇ ಏಳು ಸಾವಿರದ ೫೦೦ಕ್ಕೂ ಹೆಚ್ಚು ಕಂಪನಿಗಳು ಸಮ್ಮೇಳನದಲ್ಲಿ ಭಾಗವಹಿಸಲಿವೆ.

*******************

ಜವಾಬ್ದಾರಿಯುತ ಕೃತಕ ಬುದ್ಧಿಮತ್ತೆಯ ಅನುಷ್ಠಾನಕ್ಕೆ ನಂಬಿಕೆ ಮತ್ತು ಸುರಕ್ಷತೆ ಅತ್ಯಗತ್ಯ ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ನಡೆದ ಟ್ರಸ್ಟ್ ಅಂಡ್ ಸೇಫ್ಟಿ ಫೆಸ್ಟಿವಲ್ ಇಂಡಿಯಾ ಉದ್ದೇಶಿಸಿ ಮಾತನಾಡಿದ ಅವರು, ಮುಂಬರುವ ವರ್ಷಗಳಲ್ಲಿ ಕೃತಕ ಬುದ್ಧಿಮತ್ತೆಯು ಆರ್ಥಿಕತೆಯನ್ನು ಪರಿವರ್ತಿಸುತ್ತದೆ, ಕೆಲಸದ ಅಭ್ಯಾಸಗಳನ್ನು ಬದಲಾಯಿಸುತ್ತದೆ, ಹೊಸ ಆರೋಗ್ಯ ಪರಿಹಾರಗಳನ್ನು ಸೃಷ್ಟಿಸುತ್ತದೆ ಮತ್ತು ಶೈಕ್ಷಣಿಕ ಪ್ರವೇಶವನ್ನು ಹೆಚ್ಚಿಸುತ್ತದೆ ಎಂದು ಅಭಿಪ್ರಾಯಪಟ್ಟರು. ಜೀವನಶೈಲಿಯಲ್ಲಿ ಎಐ ಸೇರ್ಪಡೆಯು ಪ್ರಪಂಚದ ಪ್ರತಿಯೊಂದು ಮೂಲೆಯಲ್ಲಿರುವ ಪ್ರತಿಯೊಬ್ಬ ನಾಗರಿಕರ ಮೇಲೆ ಪರಿಣಾಮ ಬೀರುತ್ತದೆ. ಎಐ ಆಡಳಿತಕ್ಕೆ ಸಮತೋಲಿತ ವಿಧಾನವನ್ನು ಅಳವಡಿಸಿಕೊಳ್ಳುವ

ಮತ್ತು ಡಿಜಿಟಲ್ ನಾಗರಿಕರನ್ನು ರಕ್ಷಿಸಲು ಪರಿಣಾಮಕಾರಿ ಸುರಕ್ಷತಾ ಕ್ರಮಗಳಿವೆ ಎಂಬುದನ್ನು ಖಚಿತಪಡಿಸಿಕೊಳ್ಳುವ ಅಗತ್ಯವಿದೆ ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಪ್ರತಿಪಾದಿಸಿದ್ದಾರೆ.

ಧ್ವನಿ:. ಡಾ. ಜೈಶಂಕರ್ ( ೨೫ ಸೆಕೆಂಡುಗಳು)

*******************

ಇಂದು ದೇಶಾದ್ಯಂತ ಮಹರ್ಷಿ ವಾಲ್ಮೀಕಿ ಜಯಂತಿ ಆಚರಿಸಲಾಗುತ್ತಿದೆ. ಈ ಸಂದರ್ಭದಲ್ಲಿ ದೇಶವಾಸಿಗಳಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಸೇರಿದಂತೆ ಅನೇಕ ಗಣ್ಯರು ಶುಭಾಶಯ ಕೋರಿದ್ದಾರೆ. ಈ ದಿನದಂದು ರಾಮಾಯಣದ ಕರ್ತೃ ಮಹರ್ಷಿ ವಾಲ್ಮೀಕಿಯವರ ಜನ್ಮ ವಾರ್ಷಿಕೋತ್ಸವವನ್ನು ಆಚರಿಸಲಾಗುತ್ತದೆ. ಮಹರ್ಷಿ ವಾಲ್ಮೀಕಿಯನ್ನು 'ಆದಿ ಕವಿ' ಎಂದೂ ಪೂಜಿಸಲಾಗುತ್ತದೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಆದಿಕವಿ ವಾಲ್ಮೀಕಿ ರಚಿಸಿದ 'ರಾಮಾಯಣ' ಮಾನವ ಸಮಾಜಕ್ಕೆ ಭಗವಾನ್ ಶ್ರೀ ರಾಮನ ಸ್ಫೂರ್ತಿದಾಯಕ ಕಥೆ ಮತ್ತು ಆದರ್ಶ ಜೀವನ ಮೌಲ್ಯಗಳ ಪರಂಪರೆಯನ್ನು ನೀಡಿದೆ. ಮಹರ್ಷಿ ವಾಲ್ಮೀಕಿ - ಆಧ್ಯಾತ್ಮಿಕ ಜಾಗೃತಿ, ಕರುಣೆ ಮತ್ತು ಮಾನವ ಆದರ್ಶಗಳ ಸಂಕೇತ ಎಂದು ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ, ಮಹರ್ಷಿ ವಾಲ್ಮೀಕಿಯವರ ಶುದ್ಧ ಮತ್ತು ಆದರ್ಶ ಚಿಂತನೆಗಳು ಪ್ರಾಚೀನ ಕಾಲದಿಂದಲೂ ಭಾರತೀಯ ಸಮಾಜ ಮತ್ತು ಕುಟುಂಬಗಳ ಮೇಲೆ ಆಳವಾದ ಪ್ರಭಾವ ಬೀರಿವೆ. ಸಾಮಾಜಿಕ ಸಾಮರಸ್ಯವನ್ನು ಆಧರಿಸಿದ ಮಹರ್ಷಿ ವಾಲ್ಮೀಕಿಯವರ ಪರಿಕಲ್ಪನೆಯು ನಾಗರಿಕರ ಜೀವನವನ್ನು ಶಾಶ್ವತವಾಗಿ ಬೆಳಗಿಸುತ್ತದೆ ಎಂದು ಹೇಳಿದ್ದಾರೆ.

*******************

'ಕ್ಷಿಪ್ರ ಕ್ರಿಯಾ ಪಡೆ'ಯ ಸಂಸ್ಥಾಪನಾ ದಿನವಾದ ಇಂದು, ಸಿಬ್ಬಂದಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಶುಭಾಶಯ ಕೋರಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅಮಿತ್ ಶಾ, ಕ್ಷಿಪ್ರ ಕ್ರಿಯಾ ಪಡೆ-ಭಾರತದ ಆಂತರಿಕ ಭದ್ರತೆಯ ಆಧಾರಸ್ತಂಭವೆಂದು ಪ್ರಶಂಸಿಸಲ್ಪಟ್ಟಿದ್ದು, ಅದಮ್ಯ ಧೈರ್ಯ ಮತ್ತು ತ್ಯಾಗದಿಂದ ವೃತ್ತಿಪರತೆಯಲ್ಲಿ ಅತ್ಯುತ್ತಮ ಮಾನದಂಡವನ್ನು ಸ್ಥಾಪಿಸಿದೆ ಎಂದು ಹೇಳಿದ್ದಾರೆ. ಕರ್ತವ್ಯದ ಸಮಯದಲ್ಲಿ ತಮ್ಮ ಪ್ರಾಣವನ್ನೇ ಅರ್ಪಿಸಿದ ಧೈರ್ಯಶಾಲಿ ಸಿಬ್ಬಂದಿಗೆ ಇದೇ ವೇಳೆ ಕೇಂದ್ರ ಗೃಹ ಸಚಿವರು ನಮನ ಸಲ್ಲಿಸಿದರು.

*******************

ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಪಾಕಿಸ್ತಾನದ ವಿರುದ್ಧ ಭಾರತ ಕಿಡಿಕಾರಿದೆ. ಪಾಕಿಸ್ತಾನ ತನ್ನದೇ ಜನರ ಮೇಲೆ ಬಾಂಬ್ ದಾಳಿ ನಡೆಸಿ, ವ್ಯವಸ್ಥಿತ ನರಮೇಧವನ್ನು ನಡೆಸುತ್ತಿದೆ ಎಂದು ಭಾರತ ಆರೋಪಿಸಿದೆ. ಮಹಿಳೆಯರು, ಶಾಂತಿ ಮತ್ತು ಭದ್ರತೆ ಕುರಿತಾದ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಚರ್ಚೆಯಲ್ಲಿ ವಿಶ್ವಸಂಸ್ಥೆಗೆ ಭಾರತದ ರಾಯಭಾರಿ ಪರ್ವತನೇನಿ ಹರೀಶ್, ಪಾಕಿಸ್ತಾನ ೧೯೭೧ ರಲ್ಲಿ ಆಪರೇಷನ್ 'ಸರ್ಚ್‌ಲೈಟ್' ಅನ್ನು ನಡೆಸಿತ್ತು ಎಂದು ಹೇಳಿದರು. ಪಾಕಿಸ್ತಾನವು ತನ್ನದೇ ಸೈನ್ಯದಿಂದ ಲಕ್ಷ ಮಹಿಳಾ ನಾಗರಿಕರ ಮೇಲೆ ಸಾಮೂಹಿಕ ಅತ್ಯಾಚಾರದ ವ್ಯವಸ್ಥಿತ ಅಭಿಯಾನವನ್ನು ಅನುಮೋದಿಸಿದೆ ಎಂದು ಅವರು ದೂರಿದರು. ಮಹಿಳೆಯರು, ಶಾಂತಿ ಮತ್ತು ಭದ್ರತಾ ಕಾರ್ಯಸೂಚಿಗೆ ತನ್ನ ಬದ್ಧತೆಯಲ್ಲಿ ಭಾರತ ಅಚಲವಾಗಿ ಉಳಿದಿದೆ ಮತ್ತು ಪಾಲುದಾರರೊಂದಿಗೆ, ವಿಶೇಷವಾಗಿ ಜಾಗತಿಕ ದಕ್ಷಿಣ ರಾಷ್ಟ್ರಗಳೊಂದಿಗೆ ತನ್ನ ಪರಿಣತಿಯನ್ನು ಹಂಚಿಕೊಳ್ಳಲು ಸಿದ್ಧವಾಗಿದೆ ಎಂದು ಪರ್ವತನೇನಿ ಹರೀಶ್ ಹೇಳಿದರು.

******************

ಉಪರಾಷ್ಟ್ರಪತಿ, ರಾಜ್ಯಸಭೆ ಸಭಾಪತಿ ಸಿ.ಪಿ.ರಾಧಾಕೃಷ್ಣನ್ ಅವರು ಇಂದು ವಿರೋಧ ಪಕ್ಷಗಳು ಸೇರಿದಂತೆ ವಿವಿಧ ಪಕ್ಷಗಳ ಸದನದ ನಾಯಕರನ್ನು ಭೇಟಿ ಮಾಡಲಿದ್ದಾರೆ. ಮೇಲ್ಮನೆಯ ಅಧ್ಯಕ್ಷರಾಗಿ ಚುನಾಯಿತ ಪ್ರತಿನಿಧಿಗಳೊಂದಿಗೆ ಅವರ ಮೊದಲ ಔಪಚಾರಿಕ ಸಭೆ ಇದಾಗಲಿದೆ. ಈ ಸಭೆಯು ಸಂಸತ್ತಿನ ಚಳಿಗಾಲದ ಅಧಿವೇಶನಕ್ಕೆ ಪೂರ್ವಭಾವಿಯಾಗಿದ್ದು, ಮುಂದಿನ ತಿಂಗಳು ಸಂಸತ್ತಿನ ಚಳಿಗಾಲದ ಅಧಿವೇಶನ ಪ್ರಾರಂಭವಾಗುವ ಸಾಧ್ಯತೆಯಿದೆ. ಸದನದ ನಾಯಕರೊಂದಿಗೆ ಉಪರಾಷ್ಟ್ರಪತಿಗಳ ಔಪಚಾರಿಕ ಸಭೆಯಲ್ಲಿ ಮುಂಬರುವ ಅಧಿವೇಶನದಲ್ಲಿ ಸದನದ ಸುಗಮ ಕಾರ್ಯನಿರ್ವಹಣೆಯ ಕುರಿತು ಚರ್ಚೆಗಳು ನಡೆಯುವ ನಿರೀಕ್ಷೆಯಿದೆ.

******************

ನೇಪಾಳದಲ್ಲಿ, ಕಳೆದ ಮೂರು ದಿನಗಳಲ್ಲಿ ಭೂಕುಸಿತ ಮತ್ತು ಪ್ರವಾಹದಿಂದಾಗಿ ಎಂಟು ಜನರು ಸಾವನ್ನಪ್ಪಿದ್ದಾರೆ. ನೇಪಾಳ ಗೃಹ ಸಚಿವಾಲಯದ ಮೂಲಗಳ ಪ್ರಕಾರ, ೧೧ ಜಿಲ್ಲೆಗಳಲ್ಲಿ ೧೫ ಮಕ್ಕಳು ಸೇರಿದಂತೆ ಒಟ್ಟು ೬೦ ಜನರು ಮೃತಪಟ್ಟಿದ್ದಾರೆ. ಹೆಚ್ಚಿನ ಸಾವುಗಳು ಕೋಶಿ ಪ್ರಾಂತ್ಯದ ಇಲಾಮ್ ಜಿಲ್ಲೆಯಲ್ಲಿ ಸಂಭವಿಸಿವೆ. ಅಲ್ಲಿ ಪ್ರವಾಹ, ಭೂಕುಸಿತ ಮತ್ತು ರಸ್ತೆ ಅಪಘಾತಗಳು ಉಂಟಾಗಿವೆ. ಕೋಶಿ, ಮಾಧೇಶ್, ಬಾಗ್ಮತಿ, ಗಂಡಕಿ ಮತ್ತು ಲುಂಬಿನಿ ಪ್ರದೇಶದಲ್ಲಿ ಮುಂಗಾರು ಸಕ್ರಿಯವಾಗಿದೆ. ರಕ್ಷಣಾ ಕಾರ್ಯಾಚರಣೆಗಾಗಿ ನೇಪಾಳ ಸೇನೆ, ನೇಪಾಳ ಪೊಲೀಸ್ ಮತ್ತು ಸಶಸ್ತ್ರ ಪೊಲೀಸ್ ಪಡೆ ಸಿಬ್ಬಂದಿಯನ್ನು ವಿವಿಧ ಪ್ರದೇಶಗಳಲ್ಲಿ ನಿಯೋಜಿಸಲಾಗಿದೆ. ಮಳೆ ಸಂಬಂಧಿತ ವಿಪತ್ತುಗಳಲ್ಲಿ ಪ್ರಾಣ ಕಳೆದುಕೊಂಡವರ ಕುಟುಂಬಕ್ಕೆ ತಕ್ಷಣದ ಪರಿಹಾರವಾಗಿ ಎರಡು ಲಕ್ಷ ನೇಪಾಳಿ ರೂಪಾಯಿಗಳ ಪರಿಹಾರವನ್ನು ನೇಪಾಳಿ ಸರ್ಕಾರ ಘೋಷಿಸಿದ್ದು, ಗಾಯಾಳುಗಳಿಗೆ ಉಚಿತ ಚಿಕಿತ್ಸೆ ನೀಡಲಾಗುತ್ತಿದೆ.

******************

ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್ ನಾಳೆಯಿಂದ ಎರಡು ದಿನಗಳ ಭಾರತ ಭೇಟಿಯಲ್ಲಿದ್ದಾರೆ. ಇದು ಪ್ರಧಾನಿಯಾಗಿ ಅಧಿಕಾರ ವಹಿಸಿಕೊಂಡ ನಂತರ ಸ್ಟಾರ್ಮರ್ ಅವರ ಮೊದಲ ಅಧಿಕೃತ ಭಾರತ ಭೇಟಿಯಾಗಲಿದೆ. 'ವಿಷನ್ ೨೦೩೫' ನ ವಿವಿಧ ಅಂಶಗಳಲ್ಲಿ ಭಾರತ-ಬ್ರಿಟನ್ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯ ವಿವಿಧ ಕ್ಷೇತ್ರಗಳಲ್ಲಿ ಆಗಿರುವ ಪ್ರಗತಿಯನ್ನು ಸ್ಟಾರ್ಮರ್ ಮತ್ತು ಪ್ರಧಾನಿ ನರೇಂದ್ರ ಮೋದಿ ಈ ತಿಂಗಳ ೯ ರಂದು ಮುಂಬೈನಲ್ಲಿ ಪರಿಶೀಲಿಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

******************

ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ನಾಳೆ ದೆಹಲಿಯಲ್ಲಿ ಏಷ್ಯಾದ ಪ್ರೀಮಿಯರ್ ಟೆಲಿಕಾಂ ಮತ್ತು ತಂತ್ರಜ್ಞಾನ ಕಾರ್ಯಕ್ರಮವಾದ ಇಂಡಿಯಾ ಮೊಬೈಲ್ ಸಮಾವೇಶ ೨೦೨೫ ಅನ್ನು ಉದ್ಘಾಟಿಸಲಿದ್ದಾರೆ. ನಾಲ್ಕು ದಿನಗಳ ಈ ಮೆಗಾ ಕಾರ್ಯಕ್ರಮವು ಅಕ್ಟೋಬರ್ ೮ ರಿಂದ ೧೧ ರವರೆಗೆ ನವದೆಹಲಿಯ ಯಶೋಭೂಮಿ ಕನ್ವೆನ್ಷನ್ ಸೆಂಟರ್‌ನಲ್ಲಿ ನಡೆಯಲಿದೆ. ಈ ಕಾರ್ಯಕ್ರಮದ ವಿಷಯ "ಇನ್ನೋವೇಟ್ ಟು ಟ್ರಾನ್ಸ್‌ಫಾರ್ಮ್" ಹಾಗೂ ಐಎಂಸಿ ೨೦೨೫ ದೂರಸಂಪರ್ಕ ಮತ್ತು ಡಿಜಿಟಲ್ ತಂತ್ರಜ್ಞಾನ ಕ್ಷೇತ್ರಗಳಲ್ಲಿ ಸ್ವಾವಲಂಬನೆ ಮತ್ತು ಆತ್ಮನಿರ್ಭರ ಭಾರತವನ್ನು ಉತ್ತೇಜಿಸುವ ಗುರಿಯನ್ನು ಹೊಂದಿದೆ.

******************

ಪ್ರಧಾನಿ ನರೇಂದ್ರ ಮೋದಿ ನಾಳೆ ಮತ್ತು ನಾಡಿದ್ದು ಎರಡು ದಿನಗಳ ಕಾಲ ಮಹಾರಾಷ್ಟ್ರಕ್ಕೆ ಭೇಟಿ ನೀಡಲಿದ್ದಾರೆ. ಈ ಸಮಯದಲ್ಲಿ ಅವರು, ನವಿ ಮುಂಬೈ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಉದ್ಘಾಟಿಸಲಿದ್ದಾರೆ ಹಾಗೂ ಮುಂಬೈನಲ್ಲಿ ವಿವಿಧ ಯೋಜನೆಗಳನ್ನು ಲೋಕಾರ್ಪಣೆ ಮಾಡಲಿದ್ದಾರೆ.

******************

ಗುವಾಹಟಿಯ ಬರ್ಸಪರಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯುವ ಮಹಿಳಾ ಏಕದಿನ ವಿಶ್ವಕಪ್ ಕ್ರಿಕೆಟ್ ಪಂದ್ಯದಲ್ಲಿ ಇಂಗ್ಲೆಂಡ್ ವನಿತಾ ತಂಡ, ಬಾಂಗ್ಲಾದೇಶವನ್ನು ಎದುರಿಸಲಿದೆ. ಪಂದ್ಯ ಮಧ್ಯಾಹ್ನ ೩ ಗಂಟೆಗೆ ಆರಂಭವಾಗಲಿದೆ.

******************